# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 530
ಸದಸ್ಯರ ಹೆಸರು : ಶ್ರೀ ಕೆ. ಗೋವಿಂದರಾಜ್
(ವಿಧಾನ ಸಭೆಯಿಂದ ಚುನಾಯಿತರು)
ಉತ್ತರಿಸಬೇಕಾದ ದಿನಾಂಕ : 13-12-2018
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಪ್ರಶ್ನೆ | ಉತ್ತರ |
|---|---|
| (ಅ) ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಯೋಜನೆಯಡಿ ಕೆಲಸ ಮಾಡುತ್ತಿರುವ ಶಿಕ್ಷಕರಿಗೆ ಕಳೆದ ಫೆಬ್ರವರಿಯಿಂದ ವೇತನ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) ಕೇಂದ್ರ ಸರ್ಕಾರ ಮಾಧ್ಯಮಿಕ ಶಿಕ್ಷಣದ ಗುಣಮಟ್ಟ ಹೆಚ್ಚಿಸಲು ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಜಾರಿಗೆ ತಂದಿದ್ದು, ಶಿಕ್ಷಣ ಇಲಾಖೆ ಮತ್ತು ಹಣಕಾಸು ಇಲಾಖೆಯ ಸಮನ್ವಯತೆ ಕೊರತೆಯಿಂದ ಅಭಿಯಾನದ ಶಿಕ್ಷಕರಿಗೆ ರೂ.100 ಕೋಟಿಗೂ ಮಿಗಿಲಾದ ವೇತನ ಪಾವತಿಯಾಗದೆ ಶಿಕ್ಷಕರು ಅತೀವ ಕಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಇ) ಹಿಂದಿನ ಸರ್ಕಾರದ ಯೋಜನೆಯನ್ನು ಮುಂದುವರಿಸಿರುವ ಸಮ್ಮಿಶ್ರ ಸರ್ಕಾರವು ಈ ನಿಟ್ಟಿನಲ್ಲಿ ಕೋಡಲೇ ಅಗತ್ಯ ಕ್ರಮ ಕೈಗೊಂಡು ಸಮಸ್ಯೆಯನ್ನು ಬಗೆಹರಿಸುವುದೇ? | 2018-19ನೇ ಸಾಲಿನ ಪರಿಷ್ಕೃತ ಆಯವ್ಯಯದಲ್ಲಿ ಆರ್.ಎಂ.ಎಸ್.ಎ. ಶಾಲಾ ಶಿಕ್ಷಕರ ವೇತನಕ್ಕಾಗಿ ರೂ.15,673.00 ಲಕ್ಷ ಅನುದಾನ ನಿಗದಿಯಾಗಿರುತ್ತದೆ. ಇದರಲ್ಲಿ ಈವರೆಗೆ ಮೂರು ತ್ರೈಮಾಸಿಕಗಳಲ್ಲಿ ರೂ.11,754.50 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ<br><br>2018-19ನೇ ಸಾಲಿಗೆ ಮಂಜೂರಾದ ವೇತನಾನುದಾನದಲ್ಲಿ ಜುಲೈ-2018ರ ವರೆಗೆ ಆರ್.ಎಂ.ಎಸ್.ಎ ಶಿಕ್ಷಕರ ವೇತನಕ್ಕೆ ಅನುದಾನದ ಕೊರತೆ ಇರುವ ಜಿಲ್ಲೆಗಳಿಗೆ ತಾಲ್ಲೂಕುವಾರು ಹೆಚ್ಚುವರಿಯಾಗಿ ರೂ.273.45 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.<br><br>ನಾಲ್ಕನೇ ತ್ರೈಮಾಸಿಕ ಅನುದಾನ ರೂ.3918.50 ಲಕ್ಷಗಳ ಬಿಡುಗಡೆಯ ನಂತರವೂ ಕೊರತೆ ಉಂಟಾಗುವ ಜಿಲ್ಲೆಗಳಿಗೆ ಹೆಚ್ಚುವರಿಯಾಗಿ ರೂ.3317.16 ಲಕ್ಷಗಳನ್ನು ಬಿಡುಗಡೆಗೊಳಿಸಲು ಪ್ರಸ್ತಾವನೆ ಸ್ವೀಕೃತವಾಗಿದ್ದು, ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |

ಇಡಿ 181 ಯೋಯೋಕ 2018

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ